# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 714
ಉತ್ತರಿಸಬೇಕಾದ ದಿನಾಂಕ : 17.09.2021
ಸದಸ್ಯರ ಹೆಸರು : ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮ ನಿರ್ದೇಶನ ಹೊಂದಿದವರು)
ಉತ್ತರಿಸುವ ಸಚಿವರು : ಮಾನ್ಯ ರೇಷ್ಮೆ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯ ಮತ್ತು ಅಂತಾರಾಷ್ಟ್ರೀಯ ಮಟ್ಟದ ಕ್ರೀಡಾಪಟುಗಳನ್ನು ತರಬೇತಿಗೊಳಿಸಿ ಪ್ರೋತ್ಸಾಹಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; | ರಾಜ್ಯದಲ್ಲಿ 34 ಕ್ರೀಡಾ ವಸತಿ ಶಾಲೆ/ನಿಲಯಗಳಿದ್ದು, ರಾಜ್ಯ, ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದ ಕ್ರೀಡಾಪಟುಗಳಿಗೆ ಉಚಿತ ಊಟೋಪಹಾರ, ವಸತಿ ಹಾಗೂ ಕ್ರೀಡಾ ತರಬೇತಿ ನೀಡಲಾಗುತ್ತಿದೆ. ಭಾರತದ ಎಪ್ಪತ್ತೈದನೇ ಸ್ವಾತಂತ್ರ್ಯೋತ್ಸವದ ಅಂಗವಾಗಿ 75 ಯುವ ಪ್ರತಿಭಾವಂತ ಕ್ರೀಡಾಪಟುಗಳನ್ನು ಗುರುತಿಸಿ, ಉತ್ತಮ ತರಬೇತಿ ಸೌಲಭ್ಯದೊಂದಿಗೆ ಪ್ರೋತ್ಸಾಹ ನೀಡಲು 'ಅಮೃತ ಕ್ರೀಡಾ ದತ್ತು ಯೋಜನೆ' ಆರಂಭಿಸಲಾಗಿದೆ. ಅಲ್ಲದೇ, ಸಾಧಕ ಕ್ರೀಡಾಪಟುಗಳಿಗೆ ವಿವಿಧ ಹಂತದ ಕ್ರೀಡಾಕೂಟಗಳಲ್ಲಿ ಪದಕ ವಿಜೇತರಾದಾಗ ಕೆಳಕಾಣಿಸಿದಂತೆ ನಿಗದಿತ ನಗದು ಬಹುಮಾನ ನೀಡಿ ಉತ್ತೇಜಿಸಲಾಗುತ್ತಿದೆ:- |

| ಕ್ರ.ಸಂ | ವಿವರ | ಚಿನ್ನ (ರೂ. ಲಕ್ಷಗಳಲ್ಲಿ) | ಬೆಳ್ಳಿ (ರೂ. ಲಕ್ಷಗಳಲ್ಲಿ) | ಕಂಚು (ರೂ. ಲಕ್ಷಗಳಲ್ಲಿ) |
|---|---|---|---|---|
| 1 | ಒಲಂಪಿಕ್ಸ್ ಗೇಮ್ಸ್ | 500.00 | 300.00 | 200.00 |
| 2 | ಏಷಿಯನ್ ಗೇಮ್ಸ್ | 25.00 | 15.00 | 8.00 |
| 3 | ಕಾಮನ್ ವೆಲ್ ಗೇಮ್ಸ್ | 25.00 | 15.00 | 8.00 |
| 4 | ವರ್ಲ್ಡ್ ಕಪ್ /ಚಾಂಪಿಯನ್ ಷಿಪ್ (ಭಾರತ ಸರ್ಕಾರದಿಂದ ಅಂಗೀಕೃತವಾಗಿ ಭಾರತ ತಂಡದ ಭಾಗವಾಗಿ ಪ್ರತಿನಿಧಿಸಿರಬೇಕು) | 5.00 | 3.00 | 2.00 |
| 5 | ನ್ಯಾಷನಲ್ ಗೇಮ್ಸ್ (ಪ್ರತಿ ನಾಲ್ಕು ವರ್ಷಗಳಿಗೊಮ್ಮೆ ನಡೆಯುವ ಕ್ರೀಡೆಗಳು) | 5.00 | 3.00 | 2.00 |
| 6. | ನ್ಯಾಷನಲ್ | 2.00 | 1.00 | 0.50 |

| | | | | | | |
|---|---|---|---|---|---|---|
| | | | ಚಾಂಪಿಯನ್ ಷಿಪ್ (ಒಲಂಪಿಕ್ ಕ್ರೀಡೆಗಳಿಗೆ ಮಾತ್ರ) | | | |
| | | 7 | ಜೂನಿಯರ್ ನ್ಯಾಷನಲ್ (ಒಲಂಪಿಕ್ ಕ್ರೀಡೆಗಳಿಗೆ ಮಾತ್ರ) | 0.50 | 0.25 | 0.15 |
| | | 8 | ಸಬ್ ಜೂನಿಯರ್ ನ್ಯಾಷನಲ್ (ಒಲಂಪಿಕ್ ಕ್ರೀಡೆಗಳಿಗೆ ಮಾತ್ರ) | 0.25 | 0.15 | 0.10 |
| ಆ) | ರಾಜ್ಯದಲ್ಲಿ ಯಾವ ಯಾವ ಕ್ರೀಡೆಯಲ್ಲಿ ರಾಜ್ಯ ಮತ್ತು ಅಂತಾರಾಷ್ಟ್ರೀಯ ಕ್ರೀಡಾಪಟುಗಳಿದ್ದಾರೆ; (ವಿವರ ನೀಡುವುದು) | ರಾಜ್ಯದಲ್ಲಿ ರಾಜ್ಯ, ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಮಟ್ಟದ ಕ್ರೀಡಾಪಟುಗಳಿರುವ ಕ್ರೀಡೆಗಳ ವಿವರಗಳನ್ನು ಅನುಬಂಧ-1ರಲ್ಲಿ ಒದಗಿಸಿದೆ. | | | | |
| ಇ) | ಕ್ರೀಡಾಪಟುಗಳನ್ನು ಪ್ರೋತ್ಸಾಹಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ವಿವರ ನೀಡುವುದು) | ಕ್ರೀಡಾಪಟುಗಳನ್ನು ಪ್ರೋತ್ಸಾಹಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳನ್ನು ಅನುಬಂಧ-2ರಲ್ಲಿ ಒದಗಿಸಿದೆ. | | | | |

**ವೈಎಸ್‌ಡಿ/ಇಬಿಬಿ/140/2021**

**(ಡಾ. ನಾರಾಯಣಗೌಡ)**
ರೇಷ್ಮೆ, ಯುವ ಸಬಲೀಕರಣ ಮತ್ತು
ಕ್ರೀಡಾ ಸಚಿವರು.

ಚು.ರ. ಪ್ರ. ಸಂ.: 714

## ಅನುಬಂಧ-01

| ಕ್ರ.ಸಂ | ಕ್ರೀಡೆ | ಕ್ರ.ಸಂ | ಕ್ರೀಡೆ |
|---|---|---|---|
| 1 | ಅರ್ಚರಿ | 21 | ಶೂಟಿಂಗ್ |
| 2 | ಅಥ್ಲೆಟಿಕ್ಸ್ | 22 | ಈಜು |
| 3 | ಬ್ಯಾಡ್ಮಿಂಟನ್ | 23 | ಟೇಬಲ್ ಟೆನ್ನಿಸ್ |
| 4 | ಬಾಸ್ಕೆಟ್ ಬಾಲ್ | 24 | ಟೇಕ್ವೊಂಡೊ |
| 5 | ವಾಲಿಬಾಲ್ | 25 | ಟೆನ್ನಿಸ್ |
| 6 | ಬಾಕ್ಸಿಂಗ್ | 26 | ಟ್ರಯಾಥ್ಲಾನ್ |
| 7 | ಕೆನೊಯಿಂಗ್ | 27 | ವಾಲಿಬಾಲ್ |
| 8 | ಸೈಕ್ಲಿಂಗ್ | 28 | ಭಾರ ಎತ್ತುವುದು |
| 9 | ಡೈವಿಂಗ್ | 29 | ಕುಸ್ತಿ |
| 10 | ಈಕ್ವೇಸ್ಟ್ರಿಯನ್ | 30 | ಕ್ರಿಕೆಟ್ |
| 11 | ಫೆನ್ಸಿಂಗ್ | 31 | ನೆಟ್ ಬಾಲ್ |
| 12 | ಫುಟ್ಬಾಲ್ | 32 | ಸ್ಕ್ವಾಷ್ |
| 13 | ಗಾಲ್ಫ್ | 33 | ಸಾಫ್ಟ್ ಬಾಲ್ |
| 14 | ಜಿಮ್ನಾಸ್ಟಿಕ್ಸ್ | 34 | ಕಬಡ್ಡಿ |
| 15 | ಹ್ಯಾಂಡ್ ಬಾಲ್ | 35 | ಕರಾಟೆ |
| 16 | ಹಾಕಿ | 36 | ಸ್ಕೇಟಿಂಗ್ |
| 17 | ಜುಡೊ | 37 | ಸೆಪೆಕ್ ಟ್ಯಾಕ್ರಾ |
| 18 | ಮಾಡ್ರನ್ ಪೆಂಟಥ್ಲಾನ್ | 38 | ಸ್ಪೋರ್ಟ್ಸ್ ಕ್ಲೈಂಬಿಂಗ್ |
| 19 | ರೊಯಿಂಗ್ | 39 | ಅಟ್ಯಾ-ಪಟ್ಯಾ |
| 20 | ಸೈಲಿಂಗ್ | | |

# ಅನುಬಂಧ-02

## ರಾಜ್ಯದಲ್ಲಿ ವಿವಿಧ ಕ್ರೀಡೆಗಳಲ್ಲಿ ಭಾಗವಹಿಸುವ ರಾಜ್ಯ, ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದ ಕ್ರೀಡಾಪಟುಗಳಿಗೆ ಸರ್ಕಾರದಿಂದ ಒದಗಿಸುತ್ತಿರುವ ಸೌಲಭ್ಯಗಳು

- **ನಗದು ಪುರಸ್ಕಾರ:** ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಮಟ್ಟದ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ವಿಜೇತರಾದ ಕ್ರೀಡಾಪಟುಗಳಿಗೆ ಕೆಳಕಾಣಿಸಿದಂತೆ ನಗದು ಪುರಸ್ಕಾರವನ್ನು ನೀಡಲಾಗುತ್ತಿದೆ.

| ಕ್ರ.ಸಂ | ವಿವರ | ಚಿನ್ನ | ಬೆಳ್ಳಿ | ಕಂಚು |
|---|---|---|---|---|
| 1 | ಒಲಂಪಿಕ್ಸ್ ಗೇಮ್ಸ್ | 500.00 ಲಕ್ಷ | 300.00 ಲಕ್ಷ | 200.00 ಲಕ್ಷ |
| 2 | ಏಷಿಯನ್ ಗೇಮ್ಸ್ | 25.00 ಲಕ್ಷ | 15.00 ಲಕ್ಷ | 8.00 ಲಕ್ಷ |
| 3 | ಕಾಮನ್ ವೆಲ್ತ್ ಗೇಮ್ಸ್ | 25.00 ಲಕ್ಷ | 15.00 ಲಕ್ಷ | 8.00 ಲಕ್ಷ |
| 4 | ವರ್ಲ್ಡ್ ಕಪ್ /ಚಾಂಪಿಯನ್ ಷಿಪ್ (ಭಾರತ ಸರ್ಕಾರದಿಂದ ಅಂಗೀಕೃತವಾಗಿ ಭಾರತ ತಂಡದ ಭಾಗವಾಗಿ ಪ್ರತಿನಿಧಿಸಿರಬೇಕು) | 5.00 ಲಕ್ಷ | 3.00 ಲಕ್ಷ | 2.00 ಲಕ್ಷ |
| 5 | ನ್ಯಾಷನಲ್ ಗೇಮ್ಸ್ (ಪ್ರತಿ ನಾಲ್ಕು ವರ್ಷಗಳಿಗೊಮ್ಮೆ ನಡೆಯುವ ಕ್ರೀಡೆಗಳು) | 5.00 ಲಕ್ಷ | 3.00 ಲಕ್ಷ | 2.00 ಲಕ್ಷ |
| 6 | ನ್ಯಾಷನಲ್ ಚಾಂಪಿಯನ್ ಷಿಪ್ (ಒಲಂಪಿಕ್ ಕ್ರೀಡೆಗಳಿಗೆ ಮಾತ್ರ) | 2.00 ಲಕ್ಷ | 1.00 ಲಕ್ಷ | 0.50 ಲಕ್ಷ |
| 7 | ಜೂನಿಯರ್ ನ್ಯಾಷನಲ್ (ಒಲಂಪಿಕ್ ಕ್ರೀಡೆಗಳಿಗೆ ಮಾತ್ರ) | 0.50 ಲಕ್ಷ | 0.25 ಲಕ್ಷ | 0.15 ಲಕ್ಷ |
| 8 | ಸಬ್ ಜೂನಿಯರ್ ನ್ಯಾಷನಲ್ (ಒಲಂಪಿಕ್ ಕ್ರೀಡೆಗಳಿಗೆ ಮಾತ್ರ) | 0.25 ಲಕ್ಷ | 0.15 ಲಕ್ಷ | 0.10 ಲಕ್ಷ |

- **ಏಕಲವ್ಯ ಪ್ರಶಸ್ತಿ :** ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ರಾಜ್ಯವನ್ನು ಪ್ರತಿನಿಧಿಸಿ ಸಾಧನೆ ಮಾಡಿದ ಕ್ರೀಡಾಪಟುಗಳಿಗೆ ಏಕಲವ್ಯ ಪ್ರಶಸ್ತಿ ನೀಡಲಾಗುವುದು.
- **ಜೀವಮಾನ ಸಾಧನೆ ಪ್ರಶಸ್ತಿ:** ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಮಟ್ಟದ ಕ್ರೀಡಾಪಟುಗಳಿಗೆ ತರಬೇತಿ ನೀಡಿದ ರಾಜ್ಯದ ತರಬೇತುದಾರರಿಗೆ ಅವರ ಜೀವಮಾನ ಸಾಧನೆಗೆ ಪ್ರಶಸ್ತಿ ನೀಡಲಾಗುವುದು.
- **ಕರ್ನಾಟಕ ಕ್ರೀಡಾರತ್ನ ಪ್ರಶಸ್ತಿ:** ದೇಸೀ ಗ್ರಾಮೀಣ ಕ್ರೀಡೆಗಳಲ್ಲಿ ವಿಶೇಷ ಸಾಧನೆ ಮಾಡಿದ ರಾಜ್ಯದ ಗ್ರಾಮೀಣ ಕ್ರೀಡಾಪ್ರತಿಭೆಗಳಿಗೆ ಕರ್ನಾಟಕ ಕ್ರೀಡಾರತ್ನ ಪ್ರಶಸ್ತಿ ಹಾಗೂ ನಗದನ್ನು ನೀಡಿ ಗೌರವಿಸಲಾಗುವುದು.
- **ಶೈಕ್ಷಣಿಕ ಶುಲ್ಕ ಮರುಪಾವತಿ** : ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ರಾಜ್ಯದಿಂದ ಪ್ರತಿನಿಧಿಸಿ ಸಾಧನೆ ಮಾಡಿದ ಕ್ರೀಡಾಪಟುಗಳಿಗೆ ಶೈಕ್ಷಣಿಕ ಶುಲ್ಕ ಮರು ಪಾವತಿ ಮಾಡಲಾಗುತ್ತಿದೆ.
- **ಕ್ರೀಡಾ ವಿದ್ಯಾರ್ಥಿ ವೇತನ:** ರಾಜ್ಯಮಟ್ಟದಲ್ಲಿ ಪದಕ ವಿಜೇತರಾಗಿ ರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಿದ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ರೂ.10,000/- ವಿದ್ಯಾರ್ಥಿ ವೇತನ ನೀಡಿ ಪ್ರೋತ್ಸಾಹಿಸಲಾಗುತ್ತಿದೆ.

- ಪರಿಶಿಷ್ಟ ಜಾತಿ ಮತ್ತು ಪಂಗಡದ ಸಾಧಕ ಕ್ರೀಡಾಪಟುಗಳಿಗೆ ವಿಶೇಷ ನಗದು ಪುರಸ್ಕಾರ ವಿತರಿಸಲಾಗುತ್ತಿದೆ. ಅಂತರ-ರಾಷ್ಟ್ರೀಯ, ರಾಷ್ಟ್ರೀಯ ಮತ್ತು ರಾಜ್ಯಮಟ್ಟದ ಕ್ರೀಡಾಕೂಟಗಳ ಪದಕ ವಿಜೇತರಿಗೆ ಕ್ರಮವಾಗಿ ತಲಾ ರೂ.5.00, 3.00 ಮತ್ತು 1.00 ಲಕ್ಷಗಳ ನಗದು ಪುರಸ್ಕಾರ ನೀಡಲಾಗುತ್ತಿದೆ.
- ಅಂತರಾಷ್ಟ್ರೀಯ/ ರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಿದ ಕ್ರೀಡಾಪಟುಗಳಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ಜಿಮ್ ಸಾಮಗ್ರಿಗಳನ್ನು ನೀಡಲಾಗುತ್ತಿದೆ.
- ಕ್ರೀಡಾ ವಸತಿ ಶಾಲೆ/ ನಿಲಯಗಳಲ್ಲಿ ಪ್ರವೇಶ ಪಡೆಯುವ ಪ್ರತಿಭಾವಂತ ಯುವ ಕ್ರೀಡಾಪಟುಗಳಿಗೆ ಉಚಿತ ಊಟೋಪಹಾರ, ವಸತಿ, ಕ್ರೀಡಾ ತರಬೇತಿ ಮತ್ತು ಕ್ರೀಡಾ ಸಮವಸ್ತ್ರ ಒದಗಿಸಲಾಗುತ್ತಿದೆ. ದೈಹಿಕ ಕ್ಷಮತಾ ಪರೀಕ್ಷೆಗಳಲ್ಲಿ ಹಾಗೂ ಕ್ರೀಡಾ ಕೌಶಲ್ಯ ಪರೀಕ್ಷೆ ಆಧಾರಿತವಾಗಿ 5ನೇ ತರಗತಿ ಮೇಲ್ಪಟ್ಟ ಕ್ರೀಡಾಪಟುಗಳಿಗೆ ಆಯ್ಕೆ ಪ್ರಕ್ರಿಯೆ ನಡೆಸಿ, ಪ್ರವೇಶಾವಕಾಶ ಕಲ್ಪಿಸಲಾಗುತ್ತಿದೆ.
- **ಕ್ರೀಡಾ ಮೂಲಭೂತ ಸೌಕರ್ಯಗಳ ಸೃಜನೆ:** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ನಿವೇಶನಗಳಲ್ಲಿ ಕ್ರೀಡಾ ಮೂಲ ಸೌಕರ್ಯಗಳನ್ನು ಸೃಜಿಸುವ ಮೂಲಕ ಕ್ರೀಡಾಪಟುಗಳ ಕ್ರೀಡಾ ತರಬೇತಿಗೆ ಉತ್ತೇಜನ ನೀಡಲಾಗುತ್ತಿದೆ.